# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1202 (1335)
ಸದಸ್ಯರ ಹೆಸರು : ಶ್ರೀ ಪಿ.ಹೆಚ್ ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 22.08.2025
ಉತ್ತರಿಸುವ ಸಚಿವರು : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2017-18 ನೇ ಸಾಲಿನಲ್ಲಿ ಆಯವ್ಯಯದಲ್ಲಿ ಘೋಷಿಸಿದಂತೆ ಉತ್ತರ ಕರ್ನಾಟಕದ ಭಾಗದಲ್ಲಿ ದೊಡ್ಡಾಟ ಮತ್ತು ಸಣ್ಣಾಟ, ಸುತ್ತು ಗೊಂಬೆ ಮತ್ತು ತೊಗಲುಗೊಂಬೆಯಂತಹ ಜನಪದ ಕಲೆಗಳಲ್ಲಿ ತೊಡಗಿಸಿಕೊಂಡ ಕಲಾವಿದರ ಅನುಕೂಲದ ದೃಷ್ಟಿಯಿಂದ ಕರ್ನಾಟಕ ಬಯಲಾಟ ಅಕಾಡೆಮಿಯನ್ನು ಬಾಗಲಕೋಟೆಯಲ್ಲಿ ಸ್ಥಾಪಿಸಲು ತೀರ್ಮಾನಿಸಲಾಗಿತ್ತು. ಆದರೆ ಇಲ್ಲಿಯವರೆಗೂ ಸದರಿ ಅಕಾಡೆಮಿಗೆ ಸ್ವಂತ ಕಚೇರಿ ಗುರುತಿಸದೆ ಅಧಿಕಾರಗಳು, ಸಿಬ್ಬಂದಿಗಳನ್ನು ನೇಮಿಸದೇ ಇರುವ ಕಾರಣ ಕಲಾವಿದರು ತಮ್ಮ ಸಮಸ್ಯೆಗಳ ಪರಿಹಾರಕ್ಕೆ ಪರದಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; | • ಸರ್ಕಾರಿ ಆದೇಶ ಸಂಖ್ಯೆ:ಕಸಂವಾ 195 ಕಸಧ 2017, ದಿನಾಂಕ:27.06.2017 ರನ್ವಯ ಬಾಗಲಕೋಟೆಯಲ್ಲಿ ಕರ್ನಾಟಕ ಬಯಲಾಟ ಅಕಾಡೆಮಿಯನ್ನು ಸ್ಥಾಪಿಸಲಾಗಿರುತ್ತದೆ.<br>• ಪ್ರಸ್ತುತ, ಕರ್ನಾಟಕ ಬಯಲಾಟ ಅಕಾಡೆಮಿಯ ಕಚೇರಿಯು ಸರ್ಕಾರದ ಪುನರ್ವಸತಿ ಪುನರ್ ನಿರ್ಮಾಣ ಕೃಷ್ಣಾ ಮೇಲ್ದಂಡೆ ಯೋಜನೆ ಕಚೇರಿಯ ಕಲಾಭವನದಲ್ಲಿ ಕಾರ್ಯನಿರ್ವಹಿಸುತ್ತಿದೆ.<br>• ಜಿಲ್ಲಾಡಳಿತ ವತಿಯಿಂದ ರಿಜಿಸ್ಟ್ರಾರ್, ಕರ್ನಾಟಕ ಬಯಲಾಟ ಅಕಾಡೆಮಿ ಹುದ್ದೆಗೆ ಸಹಾಯಕ ನಿರ್ದೇಶಕರು (ಹೆ.ಪ್ರ), ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬಾಗಲಕೋಟೆ ಇವರನ್ನು ನಿಯೋಜಿಸಲಾಗಿರುತ್ತದೆ.<br>• ಕರ್ನಾಟಕ ಬಯಲಾಟ ಅಕಾಡೆಮಿಯ ಪ್ರಥಮ ದರ್ಜೆ ಸಹಾಯಕ ಹುದ್ದೆಯಲ್ಲಿ ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. |
| ಆ) | ಬಂದಿದ್ದಲ್ಲಿ, ಬಾಗಲಕೋಟೆಯಲ್ಲಿ ಕೇಂದ್ರ ಕಛೇರಿಯನ್ನು ಸ್ಥಾಪಿಸಿ ಪೂರ್ಣ ಪ್ರಮಾಣ ಸಿಬ್ಬಂದಿಗಳನ್ನು ನಿಯೋಜಿಸಲಾಗುವುದು ಯಾವಾಗ? (ಮಾಹಿತಿ ನೀಡುವುದು) | • ಕರ್ನಾಟಕ ಬಯಲಾಟ ಅಕಾಡೆಮಿಗೆ ಪ್ರಥಮ ದರ್ಜೆ ಸಹಾಯಕ ಹುದ್ದೆಯ ಪೂರ್ಣ ಪ್ರಮಾಣದ ಸಿಬ್ಬಂದಿಯನ್ನು ನಿಯೋಜಿಸಲಾಗಿದ್ದು, ಕರ್ತವ್ಯ ನಿರ್ವಹಿಸುತ್ತಿದ್ದಾರೆ.<br>• ಸರ್ಕಾರದ ಪತ್ರ ಸಂಖ್ಯೆ:ಕಸಂವಾ 118 ಕಸನಿ ಆಕ 2022, ದಿನಾಂಕ:20.07.2024ರಲ್ಲಿ ಖಾಲಿ ಇರುವ 13 ಹುದ್ದೆಗಳಿಗೆ ಪ್ರತಿಯಾಗಿ, 06 ಗ್ರೂಪ್ "ಬಿ" ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ಅನುಮತಿ ನೀಡಲಾಗಿದೆ.<br>• ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೇನೆನಿ 2024, ದಿನಾಂಕ:25.11.2024ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ. |

ಸಂಖ್ಯೆ: ಕಸಂವಾ 70 ಕಸನಿ ಆಕ 2025

(ಶಿವರಾಜ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಯಲಾಟ ಕಲಾಪ್ರಕಾರಗಳನ್ನು ಸಂರಕ್ಷಿಸಿ ಪ್ರಚುರಪಡಿಸಲು ಉತ್ತರ ಕರ್ನಾಟಕದಲ್ಲಿ ಪ್ರತ್ಯೇಕ ಬಯಲಾಟ ಅಕಾಡೆಮಿಯನ್ನು ಸ್ಥಾಪಿಸುವ ಕುರಿತು.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ: ಕಸಂವಾ 195 ಕಸಧ 2017 ದಿನಾಂಕ 28.04.2017.

2) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ : ಡಿಕೆಸಿ–32012/13/2017, ದಿನಾಂಕ.21–06–2017.

<u>ಪ್ರಸ್ತಾವನೆ:–</u>

2017–18ನೇ ಸಾಲಿನ ಆಯವ್ಯಯ ಭಾಷಣದಲ್ಲಿ "ಬಯಲಾಟ ಕಲಾಪ್ರಕಾರಗಳನ್ನು ಸಂರಕ್ಷಿಸಿ ಪ್ರಚುರಪಡಿಸಲು ಉತ್ತರ ಕರ್ನಾಟಕದಲ್ಲಿ ಪ್ರತ್ಯೇಕ ಬಯಲಾಟ ಅಕಾಡೆಮಿಯನ್ನು ಸ್ಥಾಪಿಸಲಾಗುವುದು" ಎಂದು ಘೋಷಿಸಲಾಗಿದೆ. ಅದರಂತೆ ಬಾಗಲಕೋಟೆ ಜಿಲ್ಲೆಯಲ್ಲಿ ರೂ.50.00 ಲಕ್ಷಗಳಲ್ಲಿ ಕರ್ನಾಟಕ ಬಯಲಾಟ ಅಕಾಡೆಮಿಯನ್ನು ಸ್ಥಾಪಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ ತಾತ್ವಿಕ ಅನುಮೋದನೆ ನೀಡಲಾಗಿದೆ.

ಬಾಗಲಕೋಟೆ ಜಿಲ್ಲೆಯಲ್ಲಿ ಕರ್ನಾಟಕ ಬಯಲಾಟ ಅಕಾಡೆಮಿಯನ್ನು ಸ್ಥಾಪಿಸಲು ಅನುಕೂಲವಾಗುವಂತೆ ರೂ.50.00 ಲಕ್ಷಗಳನ್ನು 2017–18ನೇ ಸಾಲಿನ ಲೆಕ್ಕಶೀರ್ಷಿಕೆ 2205–00–102–4–13–103(ಯೋಜನೆ)ಯಡಿ ಭರಿಸಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಾಗಲಕೋಟೆ ಜಿಲ್ಲೆ, ಇವರಿಗೆ ಬಿಡುಗಡೆ ಇವರಿಗೆ ಬಿಡುಗಡೆ ಮಾಡಲು ಆದೇಶ ಹೊರಡಿಸುವಂತೆ ಕೋರಿ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ನಿರ್ದೇಶಕರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರಿ ಆದೇಶ ಸಂಖ್ಯೆ: ಕಸಂವಾ·195 ಕಸಧ 2017, ಬೆಂಗಳೂರು, ದಿನಾಂಕ:27/6/2017</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬಾಗಲಕೋಟೆ ಜಿಲ್ಲೆಯಲ್ಲಿ ಕರ್ನಾಟಕ ಬಯಲಾಟ ಅಕಾಡೆಮಿಯನ್ನು ಸ್ಥಾಪಿಸಲು ರೂ.50.00 ಲಕ್ಷಗಳನ್ನು (ರೂಪಾಯಿ ಐವತ್ತು ಲಕ್ಷಗಳನ್ನು ಮಾತ್ರ) ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಾಗಲಕೋಟೆ ಜಿಲ್ಲೆ, ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ರವರಿಗೆ ಕೆಳಕಂಡ ಷರತ್ತಿಗೆ ಒಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

:: ಷರತ್ತುಗಳು ::

1) ಇದರ ಸಮಗ್ರ ಯೋಜನಾ ವರದಿಯನ್ನು ಸಿದ್ಧಪಡಿಸತಕ್ಕದ್ದು.
2) ಯಾವ ಉದ್ದೇಶಕ್ಕೆ ಅನುದಾನ ಬಿಡುಗಡೆ ಮಾಡಿದೆಯೋ, ಅದೇ ಉದ್ದೇಶಕ್ಕೆ ಬಳಸತಕ್ಕದ್ದು [illegible] ಹಂಚಿಕೆ ಮಾಡಿರುವ ಅನುದಾನದ ಮಿತಿಯಲ್ಲಿ [illegible] ರೂಪಿಸತಕ್ಕದ್ದು.

-|12-4711|2017|4/7/17

04 JUL 2017

3) ಅಂದಾಜು ವೆಚ್ಚ ಮತ್ತು ಸಂಬಂಧಪಟ್ಟ ದಾಖಲಾತಿಗಳನ್ನು ಪಡೆದು ಪರಿಶೀಲಿಸಿ, ಅನುದಾನ ಬಿಡುಗಡೆ ಮಾಡತಕ್ಕದ್ದು.

4) ಆಯವ್ಯಯದ ಮಿತಿಯಲ್ಲಿ ವೆಚ್ಚ ಮಾಡತಕ್ಕದ್ದು.

5) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999–2000 ನಿಯಮ ಮತ್ತು ಸರ್ಕಾರ ಆಗಿಂದಾಗ್ಗೆ ಹೊರಡಿಸಿದ ಸುತ್ತೋಲೆಯಲ್ಲಿನ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು

2. ಇದಕ್ಕೆ ತಗಲುವ ವೆಚ್ಚವನ್ನು 2017-18ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-4-103(ಯೋಜನೆ)ಅಡಿ ಭರಿಸತಕ್ಕದ್ದು.

3. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2017, ದಿನಾಂಕ:05-04-2017ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪಿ.ಎಸ್.ಮಾಲತಿ) 27/6/17
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ.

ಇವರಿಗೆ: DKC/32012/37/201
ಸರ್ಕಾರದ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ, ವಿಕಾಸ ಸೌಧ, ಬೆಂಗಳೂರು

ಮಾಹಿತಿಗೆ:
ಸಹಿ/- ಉಪ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ

ಗೆ:
1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸಹಾಯಕ ನಿರ್ದೇಶಕರು, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ.
3. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು.
4. ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸಹನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳ / ಉಪ ಕಾರ್ಯದರ್ಶಿಗಳ ಆಪ್ತ ಶಾಖೆ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

Scanned with OKEN Scanner

ಕರ್ನಾಟಕ ಸರ್ಕಾರ

ಸಂಖ್ಯೆ: ಕಸಂವಾ 118 ಕಸನಿ ಆಕ 2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ:20.07.2024

ಇಂದ,

ಸರ್ಕಾರದ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
ವಿಕಾಸಸೌಧ, ಬೆಂಗಳೂರು.

ಇವರಿಗೆ,

ನಿರ್ದೇಶಕರು,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
ಕನ್ನಡ ಭವನ, ಜೆ.ಸಿ. ರಸ್ತೆ,
ಬೆಂಗಳೂರು.

ಮಾನ್ಯರೆ,

ವಿಷಯ: ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಹುದ್ದೆಗಳ ನೇರನೇಮಕಾತಿ ಮಾಡುವ ಬಗ್ಗೆ.

ಉಲ್ಲೇಖ: ತಮ್ಮ ಕಛೇರಿ ಇ-ಆಫೀಸ್ ಏಕ ಕಡತ ಸಂಖ್ಯೆ: DKC-36011/51/2015-DKC-OFFICERS-KANNADA AND CULTURE

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಇ-ಆಫೀಸ್ ಏಕ ಕಡತದಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಮೂಲ ವೃಂದದಲ್ಲಿ ಮಂಜೂರಾಗಿ ಖಾಲಿ ಇರುವ 06 ಸಹಾಯಕ ನಿರ್ದೇಶಕ ವೃಂದದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ. ಅದರಂತೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಚಾಲ್ತಿಯಲ್ಲಿರುವ 1999ರ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿನ ಸಹಾಯಕ ನಿರ್ದೇಶಕರ ಹುದ್ದೆಗಳ ಸಂಖ್ಯೆಗಳನ್ನು ಸರ್ಕಾರದ ಆದೇಶಗಳನ್ವಯ ಪರಿಶೀಲಿಸಿ ನಿಯಮಾನುಸಾರ 1999ರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,
(ಕೆ.ಆರ್.ರಮೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
(ಆಡಳಿತ ಕನ್ನಡ)



o. KCI-KSN/118/2022-AK-KC SEC (Computer No. 918476)
ated from eOffice by HARISH, KCI-ASST(HV), ASSISTANT, KANNADA AND CULTURE SECRETARIAT on 18/08/2025 04:44 PM